ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಛೇರಿ,
ನೃಪತುಂಗ ರಸ್ತೆ, ಬೆಂಗಳೂರು 560001

ಎಂ.ಸಿ.9/ಭಾ & ಮ.ಅ.ಸಂ.ಶಾ.ಘೋ/ಆ/01/2016-17 ದಿನಾಂಕ: 02/07/2018

:ಜ್ಞಾಪನ:

ವಿಷಯ: ಭಾಷಾ ಅಲ್ಪಸಂಖ್ಯಾತ ಶಾಲೆಯೆಂದು ಘೋಷಿಸುವ ಕುರಿತು.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಇಡಿ 27 ಮಾಹಿತಿ 2012(ಭಾಗ-1), ಬೆಂಗಳೂರು, ದಿನಾಂಕ: 18-06-2014.

******

ಪ್ರಸ್ತಾವನೆ:

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡ ಭಾಷಾ ಆಡಳಿತ ಮಂಡಳಿಯವರು ಸದರಿ ಶಾಲೆಯನ್ನು ಭಾಷಾ ಅಲ್ಪಸಂಖ್ಯಾತ ಶಾಲೆಯೆಂದು ಘೋಷಿಸಲು ಪ್ರಸ್ತಾವನೆಯನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ, ಇವರಿಗೆ ಸಲ್ಲಿಸಿರುತ್ತಾರೆ. ತದನಂತರ ಸದರಿ ಪ್ರಸ್ತಾವನೆಯನ್ನು ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ), ಸಾ.ಶಿ.ಇ, ಇವರು ಪರಿಶೀಲಿಸಿ, ಸ್ಪಷ್ಟ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಈ ನಿರ್ದೇಶನಾಲಯಕ್ಕೆ ಸಲ್ಲಿಸಿರುತ್ತಾರೆ.

ಆದೇಶ:

ಅದರಂತೆ, ದಿನಾಂಕ: 03-04-2018 ರಂದು ನಡೆದ ಭಾಷಾ/ಮತೀಯ ಅಲ್ಪಸಂಖ್ಯಾತ ಘೋಷಣಾ ಪರಿಶೀಲನಾ ಸಮಿತಿಯ ಸಭೆಯಲ್ಲಿ ಈ ಕೆಳಕಂಡ ಶಾಲೆಯ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಸದರಿ ಶಾಲೆಯ ಆಡಳಿತ ಮಂಡಳಿಯವರು ಉಲ್ಲೇಖಿತ ಸರ್ಕಾರಿ ಆದೇಶದನ್ವಯ ಭಾಷಾ ಅಲ್ಪಸಂಖ್ಯಾತ ಶಾಲೆಗಳ ಘೋಷಣಾ ಮಾನದಂಡಗಳನ್ನು ಪೂರೈಸಿ ಸೂಕ್ತ ದಾಖಲೆಗಳನ್ನು ಒದಗಿಸಿರುವುದರಿಂದ, ಘೋಷಣಾ ಸಮಿತಿಯು ಈ ಕೆಳಕಂಡ ಅನುದಾನ ರಹಿತ ಶಾಲೆಯನ್ನು ಷರತ್ತುಗಳ ಅನ್ವಯ ಭಾಷಾ ಅಲ್ಪಸಂಖ್ಯಾತ ಶಾಲೆಯೆಂದು ಘೋಷಿಸಿ ಆದೇಶಿಸಿದೆ.

| ಕ್ರ.ಸಂ | ಶಾಲೆಯ ವಿವರ | ಆಡಳಿತ ಮಂಡಳಿಯ ವಿವರ | ಶಾಲೆಯ ವಿಧ, ಪಠ್ಯಕ್ರಮ & ಡೈಸ್ ಕೋಡ್ | ಘೋಷಣೆ ನೀಡಿರುವ ತರಗತಿ | ಘೋಷಣಾ ಭಾಷೆಯ ವಿವರ |
|---|---|---|---|---|---|
| 1 | ಶ್ರೀ ಕುಮಾರನ್ ಚಿಲ್ಡ್ರನ್ ಹೋಮ್ ಇಂಗ್ಲೀಷ್ ನರ್ಸರಿ ಮತ್ತು ಪ್ರೈಮರಿ ಸ್ಕೂಲ್, ನಂ. 44-48, ಮಲ್ಲಸಂದ್ರ ಉತ್ತರಹಳ್ಳಿ ಹೋಬಳಿ, ಬೆಂಗಳೂರು-560062. | ಶ್ರೀ ಕುಮಾರನ್ ಚಿಲ್ಡ್ರನ್ಸ ಹೋಮ್ ಎಜುಕೇಷನಲ್ ಕೌನ್ಸಿಲ್, ಟಾಟಾ ಸಿಲ್ಕ್ ಫಾರಂ, ಬೆಂಗಳೂರು-560 004. | ಅನುದಾನ ರಹಿತ ಸಿ.ಬಿ.ಎಸ್.ಇ ಪಠ್ಯಕ್ರಮ 29200129813 | 1 ರಿಂದ 10ನೇ ತರಗತಿ (ಸಂಯುಕ್ತ ಪ್ರೌಢ ಶಾಲೆ) | ತಮಿಳು |

ಷರತ್ತುಗಳು:

1. ಶಾಲೆಗಳನ್ನು ನಡೆಸುವ ಆಡಳಿತ ಮಂಡಳಿಯು ಟ್ರಸ್ಟ್/ಸೊಸೈಟಿ ಕಾಯಿದೆ ಪ್ರಕಾರ ನೋಂದಣಿಯಾಗಿರಬೇಕು ಮತ್ತು ಕಾಲಕಾಲಕ್ಕೆ ನವೀಕರಿಸಬೇಕು.

2. ಶಾಲೆಯ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದರೆ, ಆಯಾ ಭಾಷಾ ಅಲ್ಪಸಂಖ್ಯಾತ ಸದಸ್ಯರ ಸಂಖ್ಯೆ ಕನಿಷ್ಠ ಮೂರನೇ ಎರಡರಷ್ಟಿರಬೇಕು.
3. ಶಾಲೆಯನ್ನು ನಡೆಸುವ ಭಾಷಾ ಅಲ್ಪಸಂಖ್ಯಾತ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದರೆ, ಸದರಿ ಸದಸ್ಯರು ಸಂಬಂಧಿಸಿದ ತಹಶೀಲ್ದಾರರಿಂದ ಭಾಷಾ ಪ್ರಮಾಣ (ಭಾಷೆ ನಮೂದಿಸಿರಬೇಕು) ಪತ್ರವನ್ನು ಪಡೆದಿರಬೇಕು.
4. ಭಾಷಾ ಅಲ್ಪಸಂಖ್ಯಾತರು ನಡೆಸುತ್ತಿರುವ ಪ್ರಾಥಮಿಕ ಶಾಲೆ/ ಪ್ರೌಢ ಶಾಲೆಗಳನ್ನು ನಡೆಸಲು ಕರ್ನಾಟಕ ಶಿಕ್ಷಣ ಕಾಯ್ದೆಯಡಿಯಲ್ಲಿ ಇಲಾಖೆಯಿಂದ ನೋಂದಾಯಿಸಿರಬೇಕು ಮತ್ತು ಕಾಲಕಾಲಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಿರಬೇಕು.
5. ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಲ್ಲಿ, ಆಯಾಯ ಭಾಷಾ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಆಯಾ ವರ್ಷದಲ್ಲಿ ಕನಿಷ್ಠ ಶೇ. 25 ಶೈಕ್ಷಣಿಕ ದಾಖಲಾತಿ ಹೊಂದಿರಬೇಕು.
6. ಸರ್ಕಾರ ಕಾಲಕಾಲಕ್ಕೆ ಹೊರಡಿಸುವ ಆದೇಶದಲ್ಲಿ ನಮೂದಿಸಿರುವ ಮಾನದಂಡಗಳನ್ನು ಪಾಲಿಸಲು ಬದ್ಧರಾಗಿರಬೇಕು.
7. ಸಂಸ್ಥೆಯು ಪ್ರತಿ ವರ್ಷ ಜುಲೈ 31ರಲ್ಲಿದ್ದಂತೆ ಶಾಲೆಯ ಸಂಪೂರ್ಣ ಶೈಕ್ಷಣಿಕ ಮಾಹಿತಿಯನ್ನು, ಮಕ್ಕಳ ಪ್ರವೇಶ ದಾಖಲಾತಿಯ ಉದ್ಧೃತ ದೃಢೀಕರಣ ಪಟ್ಟಿಯೊಂದಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮೂಲಕ ಈ ನಿರ್ದೇಶನಾಲಯಕ್ಕೆ ಸಲ್ಲಿಸಲು ಬದ್ಧರಾಗಿರಬೇಕು.
8. ಶಿಕ್ಷಣ ಇಲಾಖೆಯ ಅಧಿಕಾರಿಗಳು ಕಾಲಕಾಲಕ್ಕೆ ಕೇಳಿದ ಮಾಹಿತಿ ಒದಗಿಸುವುದು ಮತ್ತು ಶಾಲೆಗೆ ಅಧಿಕಾರಿಗಳು ಭೇಟಿ ನೀಡಿದಾಗ ಶಾಲೆಯಲ್ಲಿ ನಿರ್ವಹಿಸುತ್ತಿರುವ ದಾಖಲೆಗಳನ್ನು ತಪಾಸಣೆಗೆ ಒದಗಿಸುವುದು.

"ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ಭಾಷಾ ಅಲ್ಪಸಂಖ್ಯಾತ ಘೋಷಣಾ ಪ್ರಮಾಣ ಪತ್ರವನ್ನು ಹಿಂಪಡೆಯಲಾಗುವುದು".

(ಡಾ. ಎಂ.ಟಿ. ರೇಜು)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು–560 001.

02/07 02/07

<u>ಪ್ರತಿಯನ್ನು:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು–560 001, ಇವರಿಗೆ ಮಾಹಿತಿಗಾಗಿ.
2. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–560 001.
3. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–560 001.
4. ಸಂಬಂಧಿಸಿದ ಉಪನಿರ್ದೇಶಕರು(ಆ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
6. ಸಂಬಂಧಿಸಿದ ಆಡಳಿತ ಮಂಡಳಿಯ ಅಧ್ಯಕ್ಷರು/ಕಾರ್ಯದರ್ಶಿಗಳು, ಇವರಿಗೆ ಅಗತ್ಯ ಕ್ರಮಕ್ಕಾಗಿ.
7. ಸಂಬಂಧಿಸಿದ ಶಾಲಾ ಮುಖ್ಯಸ್ಥರಿಗೆ, ಅಗತ್ಯ ಕ್ರಮಕ್ಕಾಗಿ.
8. 8. ಕಛೇರಿ ಪ್ರತಿ.